ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಚಿವಾಲ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 10/1/2020

ಉ.ವಾ 10/1/20

# ಪೆಕ್ಕೆಲುಬು ವಿಡಿಯೋಗೆ ಗರಂ: ಕ್ರಮಕ್ಕೆ ಸೂಚನೆ

**ಬೆಂಗಳೂರು:** ಶಾಲೆಯಲ್ಲಿ ಬಾಲಕನೊಬ್ಬ 'ಪಕ್ಕೆಲುಬು' ಎಂಬ ಪದವನ್ನು ಸರಿಯಾಗಿ ಉಚ್ಚರಿಸಲು ಬಾರದೇ ಪದೇ ಪದೆ ತಪ್ಪು ಹೇಳುತ್ತಿರುವ ವಿಡಿಯೋವೊಂದು ಕಳೆದೆರಡು ದಿನಗಳಿಂದ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್.ಸುರೇಶ್ ಕುಮಾರ್, ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರು ಮತ್ತು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅವರಿಗೆ ಕ್ರಮಕ್ಕೈಗೊಳ್ಳಲು ಸೂಚಿಸಿದ್ದಾರೆ. ಈ ಕೃತ್ಯ ಯಾವ ಶಾಲೆಯಲ್ಲಿ ನಡೆದಿದೆ ಮತ್ತು



ಯಾವ ಶಿಕ್ಷಕರು ಈ ವಿಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಯಾರು ಹರಿಬಿಟ್ಟಿದ್ದಾರೆ ಎಂಬ ಕುರಿತು ಪತ್ತೆ ಮಾಡಲು ಸೈಬರ್ ಕ್ರೈಂ ಠಾಣೆಗೆ ದೂರು ನೀಡುವುದು ಹಾಗೂ ಈ ಶಿಕ್ಷಕರ, ಶಾಲಾ ಮುಖ್ಯಸ್ಥರ ವಿರುದ್ಧ ಕಾನೂನು ಕ್ರಮಕ್ಕೆ ಮುಂದಾಗಬೇಕು. ಅಲ್ಲದೆ, ಮುಖ್ಯವಾಗಿ ಶಿಕ್ಷಕರು ಪುಟ್ಟ ಮಕ್ಕಳ ಕಲಿಕೆಯನ್ನು ಈ ರೀತಿಯಲ್ಲಿ ವ್ಯಂಗ್ಯದ ರೀತಿಯಲ್ಲಿ ತೋರಿಸುವಂತಹ, ಇಲ್ಲವೇ ಸಾಮಾಜಿಕ ಜಾಲತಾಣಗಳಲ್ಲಿ ಹರಿಯಬಿಡುವಂತಹ ಕೃತ್ಯಗಳಿಗೆ ಮುಂದಾದರೆ ಅಂತಹ ಶಿಕ್ಷಕರ, ಶಾಲಾ ಮುಖ್ಯಸ್ಥರ ವಿರುದ್ಧ ಕ್ರಿಮಿನಲ್ ಕೇಸ್ ಸೇರಿದಂತೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಸುತ್ತೋಲೆ ಹೊರಡಿಸಬೇಕು ಎಂದು ಆದೇಶಿಸಿದ್ದಾರೆ. ಮಕ್ಕಳು ತಮ್ಮ ಉಚ್ಚಾರ ಮಾಡುವುದು ಸಹಜ. ನಿರಂತರ ಕಲಿಕೆಯ ನಂತರ ಆ ಪದದ ಕುರಿತು ಮಗುವಿಗೆ ಸ್ಪಷ್ಟತೆ ದೊರೆತಾಗ ಸರಿಯಾದ ಉಚ್ಚಾರ ಸಾಧ್ಯವಾಗುತ್ತದೆ. ಆದರೆ, ಮಗುವೊಂದು ಕಲಿಕಾ ಹಂತದಲ್ಲಿ ತಪ್ಪು ಉಚ್ಚಾರ ಮಾಡುವುದನ್ನು ವಿಡಿಯೋದಲ್ಲಿ ಪ್ರಸಾರ ಮಾಡುತ್ತಿದ್ದರೆ, ಅದು ಮಗುವಿಗೆ ಗೊತ್ತಾದಾಗ ಮಗುವಿನ ಆತ್ಮವಿಶ್ವಾಸಕ್ಕೆ ಧಕ್ಕೆಯಾಗಿ ಅದು ಕಲಿಕೆಯಲ್ಲಿ ಹಿಂದುಳಿಯುತ್ತದೆ. ಶಿಕ್ಷಕರು ಮಕ್ಕಳಿಗೆ ಸರಿಯಾಗಿ ಉಚ್ಚಾರ ಮಾಡುವುದನ್ನು ಕಲಿಸಬೇಕೇ ಹೊರತು ಅದನ್ನೇ ದೊಡ್ಡ ಅಪರಾಧವೆಂಬಂತೆ ಬಿಂಬಿಸಿ ವಿಡಿಯೋ ಮಾಡಿ ಸಾಮಾಜಿಕ ಜಾಲಾತಾಣಗಳಲ್ಲಿ ಹರಿಬಿಡುವಂತಹ ಕೆಲಸ ನಿಜಕ್ಕೂ ಅಪರಾಧ ಎಂದು ಸಚಿವರು ಹೇಳಿದ್ದಾರೆ.